3 (ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಬಸವರಾಜ ಹೊರಟ್ಟಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) – ಮಾನ್ಯ ಉಪಾಧ್ಯಕ್ಷರೇ, ದಿನಾಂಕ 28–03–2007 ರಂದು 20 ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 100 ಪ್ರಶ್ನೆಗಳ ಪೈಕಿ 80 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

ಉಪಾಧ್ಯಕ್ಷರು – ಮಂಡಿಸಲಾಯಿತು ಈಗ ಸದನವನ್ನು ನಾಳೆ ಬೆಳಿಗ್ಗೆ ಹತ್ತೂವರೆ ಗಂಟೆಗೆ ಸೇರುವಂತೆ ಮುಂದೂಡಲಾಗಿದೆ)

(ಸಭೆಯು 7 ಗಂಟೆ 28 ನಿಮಿಷಕ್ಕೆ ಮುಕ್ತಾಯಗೊಂಡಿತು ನಾಳೆ ಗುರುವಾರ, 29 ನೇ ತಾರೀಖು ಬೆಳಿಗ್ಗೆ 10 30 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ –1

1559 (1835) ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುಮಾರು ಮತಕ್ಷೇತ್ರಗಳಿಗೆ ಮಂಜೂರಾದ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭ ಮಾಡದಿರುವುದು ನಿಜವೇ,

ಆ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು,

ಇ) ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿಗೆ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡದಿರಲು ಕಾರಣಗಳೇನು,

ಈ) ಈಗಾಗಲೇ ಮಂಜೂರಾದ ಪದವಿಪೂರ್ವ ಕಾಲೇಜುಗಳಿಗೆ ಯಾವ ಮಾನದಂಡವನ್ನು ಅನುಸರಿಸಲಾಗಿದೆ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು 2006–07 ನೇ ಸಾಲಿನಲ್ಲಿ ಪ್ರಾರಂಭಿಸಲು 4 ಪ್ರತ್ಯೇಕ ಸರ್ಕಾರದ ಆದೇಶಗಳಲ್ಲಿ ಮಂಜೂರಾತಿ ನೀಡಲಾಗಿದೆ ಪ್ರಥಮ ಪಿ ಯು ತರಗತಿಯ ದಾಖಲಾತಿಗೆ ದಿನಾಂಕ 31–08–2006 ರಂದು ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು ಸದರಿ ದಿನಾಂಕದ ನಂತರ ಮಂಜೂರಾತಿ ನೀಡಲಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳು ಪ್ರಾರಂಭವಾಗಿರುವುದಿಲ್ಲ

ಇ) ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನಲ್ಲಿ ಈಗಾಗಲೇ 09 ಪದವಿ ಪೂರ್ವ ಕಾಲೇಜುಗಳಿದ್ದು, ಇವುಗಳಲ್ಲಿ 03 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಇವೆ ಈ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿಯೇ ಇನ್ನೂ ಹೆಚ್ಚಿನ ವಿದ್ಯಾರ್ಥಿಗಳ ದಾಖಲಾತಿಗೆ ಅವಕಾಶವಿದೆ ಅಲ್ಲದೆ ಡಾ॥ ನಂಜುಂಡಪ್ಪ ವರದಿಯನ್ವಯ ಕುಂದಗೋಳ ತಾಲ್ಲೂಕು ಮುಂದುವರಿದ ತಾಲ್ಲೂಕುಗಳ ಪಟ್ಟಿಯಲ್ಲಿದೆ ಅದುದರಿಂದ ಇಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವಲ್ಲಿ ಹೆಚ್ಚಿನ ಆದ್ಯತೆ ನೀಡಿರುವುದಿಲ್ಲ

ಈ) ಡಾ॥ ನಂಜುಂಡಪ್ಪನವರ ವರದಿಯನ್ವಯ ಹಿಂದುಳಿದ ಪ್ರದೇಶಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಇದಲ್ಲದೆ ಕೋರಿಕೆ ಬಂದಿರುವ ಪ್ರದೇಶಗಳಲ್ಲಿನ ಪದವಿ ಪೂರ್ವ ಕಾಲೇಜಿನ ಶೈಕ್ಷಣಿಕ ಅಗತ್ಯತೆ, ಕಟ್ಟಡ ಮತ್ತು ಇತರ ಮೂಲಭೂತ ಸೌಲಭ್ಯದ ಲಭ್ಯತೆ, ವಿದ್ಯಾರ್ಥಿಗಳ ದಾಖಲಾತಿಯ ಅಂದಾಜು ಮಾಹಿತಿ ಹಾಗೂ ಆಯವ್ಯಯದಲ್ಲಿ ಹಣಕಾಸಿನ ಲಭ್ಯತೆಯನ್ವಯ ಹಂತಹಂತವಾಗಿ ಮಂಜೂರು ಮಾಡಲಾಗುತ್ತಿದೆ

1561 (1902) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) – ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುದ್ದೇಬಿಹಾಳ ತಾಲ್ಲೂಕು ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಪ್ರಸ್ತುತ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ,